ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 648
ಸದಸ್ಯರ ಹೆಸರು : ಶ್ರೀ. ಘೋಟ್ನೇಕರ ಶ್ರೀಕಾಂತ ಲಕ್ಷ್ಮಣ
ಉತ್ತರಿಸಬೇಕಾದ ದಿನಾಂಕ : 22-07-2019
ಉತ್ತರಿಸುವ ಸಚಿವರು : ಸಮಾಜ ಕಲ್ಯಾಣ ಸಚಿವರು

ಕ್ರ. ಸಂ	ವಿಷಯ	ಉತ್ತರ
ಅ)	ಉತ್ತರ ಕನ್ನಡ ಜಿಲ್ಲೆಯ ದಟ್ಟ ಕಾಡುಗಳಲ್ಲಿ ವಾಸಿಸುವ ಕುಣಬಿ ಜನಾಂಗ ಸಾಮಾಜಿಕವಾಗಿ ಶೈಕ್ಷಣಿಕವಾಗಿ ಆರ್ಥಿಕವಾಗಿ ಮತ್ತು ರಾಜಕೀಯವಾಗಿ ಅತ್ಯಂತ ಹಿಂದುಳಿದವರಾಗಿದ್ದು, ಬುಡಕಟ್ಟು ಸಂಸ್ಕೃತಿಯ ಎಲ್ಲಾ ಗುಣ ಲಕ್ಷಣಗಳನ್ನು ಹೊಂದಿದ್ದು; ಹಲವಾರು ವರ್ಷಗಳಿಂದ ಕುಣಬಿ ಸಮಾಜವನ್ನು ಪರಿಶಿಷ್ಟ ಪಂಗಡಕ್ಕೆ ಸೇರಿಸಲು ಒತ್ತಾಯಿಸುತ್ತಾ ಬಂದರೂ ಯಾವುದೇ ಪ್ರಯೋಜನವಾಗದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; (ವಿವರ ನೀಡುವುದು)	ಕುಣಬಿ ಸಮುದಾಯವನ್ನು ಪರಿಶಿಷ್ಟ ಪಂಗಡದ ಪಟ್ಟಿಗೆ ಸೇರಿಸಲು ಕರ್ನಾಟಕ ರಾಜ್ಯ ಬುಡಕಟ್ಟು ಸಂಶೋಧನಾ ಸಂಸ್ಥೆಯವರು ಮೈಸೂರು ವಿಶ್ವವಿದ್ಯಾಲಯದ ಮೂಲಕ ಕುಲಶಾಸ್ತ್ರೀಯ ಅಧ್ಯಯನವನ್ನು ನಡೆಸಿ ಅಂತಿಮ ವರದಿಯನ್ನು ಸರ್ಕಾರಕ್ಕೆ ಸಲ್ಲಿಸಿರುತ್ತಾರೆ. ಸದರಿ ವರದಿಯನ್ವಯ ಸಚಿವ ಸಂಪುಟದ ಅನುಮೋದನೆ ಪಡೆದು, ಈ ಸಮುದಾಯವನ್ನು ರಾಜ್ಯದ ಪರಿಶಿಷ್ಟ ಪಂಗಡದ ಪಟ್ಟಿಗೆ ಸೇರಿಸಲು ಶಿಫಾರಸ್ಸಿನೊಂದಿಗೆ ಕೇಂದ್ರ ಸರ್ಕಾರಕ್ಕೆ ದಿನಾಂಕ:10.10.2017 ರಂದು ಪ್ರಸ್ತಾವನೆಯನ್ನು ಸಲ್ಲಿಸಲಾಗಿದೆ. ರಾಜ್ಯದ ಪ್ರಸ್ತಾವನೆಯನ್ನು ಪರಿಶೀಲಿಸಿರುವ ಭಾರತ ಸರ್ಕಾರದ ಗೃಹ ಮಂತ್ರಾಲಯದ ರಿಜಿಸ್ಟರ್ ಜನರಲ್ ಆಫ್ ಇಂಡಿಯಾವು ಕೆಲವು ಅಂಶಗಳಿಗೆ ಸಮರ್ಥನೆಯನ್ನು ಒದಗಿಸುವಂತೆ ಕೋರಿರುತ್ತಾರೆ. ಕುಲಸಚಿವರು, ಮೈಸೂರು ವಿಶ್ವ ವಿದ್ಯಾನಿಲಯರವರಿಂದ ರಿಜಿಸ್ಟರ್ ಜನರಲ್ ಆಫ್ ಇಂಡಿಯಾರವರ ಪರಿಶೀಲನಾ ಅಂಶಗಳಿಗೆ ಸೂಕ್ತ ಸಮರ್ಥನೆಯನ್ನು ಪಡೆದು ದಿನಾಂಕ:21.02.2019ರಂದು ಕೇಂದ್ರ ಸರ್ಕಾರಕ್ಕೆ ಕಳುಹಿಸಲಾಗಿದೆ. ಭಾರತ ಸಂವಿಧಾನ ಅನುಚ್ಛೇದ 342(2)ರ ಪ್ರಕಾರ ಯಾವುದೇ ಜಾತಿಯನ್ನು ಪರಿಶಿಷ್ಟ ಪಂಗಡದ ಪಟ್ಟಿಯಲ್ಲಿ ಸೇರ್ಪಡೆ ಮಾಡುವ ಅಥವಾ ತೆಗೆಯುವ/ಮಾರ್ಪಡಿಸಲು ಭಾರತ ಸರ್ಕಾರವು ಸಕ್ಷಮ ಪ್ರಾಧಿಕಾರವಾಗಿರುವುದರಿಂದ ಸದರಿ ಸಮುದಾಯವನ್ನು ಪರಿಶಿಷ್ಟ ಪಂಗಡಕ್ಕೆ ಸೇರಿಸುವ ಬಗ್ಗೆ ಕೇಂದ್ರ ಸರ್ಕಾರದ ಅಂತಿಮ ನಿರ್ಣಯವನ್ನು ನಿರೀಕ್ಷಿಸಲಾಗಿದೆ.
ಆ)	ಇವರನ್ನು ಯಾವ ಕಾರಣಕ್ಕಾಗಿ ಇಲ್ಲಿಯವರೆಗೆ ಪರಿಶಿಷ್ಟ ಪಂಗಡಕ್ಕೆ ಸೇರಿಸಿರುವುದಿಲ್ಲ; ಈ ಕುರಿತು ಸರ್ಕಾರಕ್ಕೆ ಅನೇಕ ಭಾರಿ ವಿನಂತಿಸಿದ್ದು, ಸದರಿ ವಿಷಯದಲ್ಲಿ ಕುಲಪತಿಗಳಿಂದ ಅಧ್ಯಯನ ನಡೆಸಿ ವರದಿ ಪಡೆಯುವುದಾಗಿ ತಿಳಿಸಿದ್ದು, ಇಲ್ಲಿಯವರೆಗೆ ಯಾವುದೇ ರೀತಿಯಲ್ಲಿ ಕ್ರಮಕೈಗೊಳ್ಳದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;	
ಇ)	ಬಂದಿದ್ದಲ್ಲಿ, ಈ ಬಗ್ಗೆ ಸರ್ಕಾರ ಕೈಗೊಳ್ಳಲಿರುವ ಕ್ರಮಗಳೇನು?	

ಸಕಇ 50 ಎಸ್‌ಎಡಿ 2019

(ಪ್ರಿಯಾಂಕ್ ಖರ್ಗೆ)
ಸಮಾಜ ಕಲ್ಯಾಣ ಸಚಿವರು.